ಶ್ರೀ ಬಿ.ಬಿ.ಶಿವಪ್ಪ (ಸಕಲೇಶಪುರ): ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಕಲೇಶಪುರ ಮತ್ತು ಆಲೂರು ಕ್ಷೇತ್ರಗಳಲ್ಲಿನ ಜಿಲ್ಲಾ ಪಂಚಾಯಿತಿಯಲ್ಲಿ ಇಂಜಿನಿಯರ್‌ಗಳ ಕೊರತೆ ಇರುವುದು ನಿಜವೇ? ಹಾಗಿದ್ದಲ್ಲಿ ಇದುವರೆವಿಗೂ ನೇಮಕಾತಿ ಮಾಡದಿರಲು ಕಾರಣವೇನು?

ಆ) ಇಂಜಿನಿಯರ್‌ಗಳ ಕೊರತೆಯಿಂದ ಕೆಲಸ ಕಾರ್ಯಗಳು ಕುಂಠಿತಗೊಂಡಿರುವುದರಿಂದ ಯಾವ ನೇಮಕಾತಿ ಮಾಡಲಾಗುವುದು?

ಶ್ರೀ ಎಂ.ಪಿ.ಪ್ರಕಾಶ್ (ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ಉಪ ವಿಭಾಗ, ಸಕಲೇಶಪುರದಲ್ಲಿ 3 ಕಿರಿಯ ಇಂಜಿನಿಯರ್ ಹುದ್ದೆಗಳು ಖಾಲಿ ಇರುತ್ತವೆ. ಆಲೂರು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ ಯಾವುದೇ ಇಂಜಿನಿಯರ್ ಹುದ್ದೆ ಖಾಲಿ ಇರುವುದಿಲ್ಲ. ಖಾಲಿ ಇರುವ ಇಂಜಿನಿಯರ್‌ಗಳ ಹುದ್ದೆಯನ್ನು ಲೋಕೋಪಯೋಗಿ ಇಲಾಖೆಯಿಂದ ನಿಯೋಜನೆ ಮೇರೆಗೆ ಭರ್ತಿ ಮಾಡಬೇಕಿದ್ದು, ಇಂಜಿನಿಯರ್‌ಗಳ ನೇಮಕಾತಿ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಆ) ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಸಕಲೇಶಪುರ ಕ್ಷೇತ್ರದಲ್ಲಿರುವ ಆಸ್ಪತ್ರೆಗಳು.

1455 (2056)

ಶ್ರೀ ಬಿ.ಬಿ.ಶಿವಪ್ಪ (ಸಕಲೇಶಪುರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಕಲೇಶಪುರ ಮತ್ತು ಆಲೂರು ಕ್ಷೇತ್ರದಲ್ಲಿರುವ ಒಟ್ಟು ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಸದರಿ ಸಕಲೇಶಪುರ ಮತ್ತು ಆಲೂರು ಕ್ಷೇತ್ರದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಒಟ್ಟು ಕೊರತೆ ಇರುವ ವೈದ್ಯರ ಮತ್ತು ಸಿಬ್ಬಂದಿಯ ಸಂಖ್ಯೆ ಎಷ್ಟು?

ಈ) ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಸಕಲೇಶಪುರ ಕ್ಷೇತ್ರದಲ್ಲಿ 15 ಆಸ್ಪತ್ರೆ ಮತ್ತು ಆಲೂರು ಕ್ಷೇತ್ರದಲ್ಲಿ 6 ಆಸ್ಪತ್ರೆಗಳಿವೆ.

ಆ) ಬಂದಿದೆ.

ಇ) ಸಕಲೇಶಪುರ ತಾಲ್ಲೂಕು ಆಸ್ಪತ್ರೆಯಲ್ಲಿ 6 ವೈದ್ಯರು ಮತ್ತು 77 ಇತರೆ ಸಿಬ್ಬಂದಿ, ಆಲೂರು ಆಸ್ಪತ್ರೆಯಲ್ಲಿ 1 ವೈದ್ಯರು ಮತ್ತು 33 ಇತರೆ ಸಿಬ್ಬಂದಿಗಳ ಹುದ್ದೆಗಳ ಖಾಲಿ ಇರುತ್ತವೆ.

ಈ) ಈಗಾಗಲೇ ಇಲಾಖೆಯು ಕಳೆದ ನಾಲ್ಕು ವರ್ಷಗಳಲ್ಲಿ 5552 ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ. ವೈದ್ಯರ ಮತ್ತು ವೈದ್ಯರೇತರರ 3159 ಹುದ್ದೆಗಳನ್ನು ತುಂಬಲು ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದೆ.

ಔಷಧಿಗಳ ಸರಬರಾಜು.

1456 (2062)

ಶ್ರೀ ಬಿ.ಶಿವರಾಮು (ಗಂಡಸಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾಥಮಿಕ ಆರೋಗ್ಯ ಘಟಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಪ್ರತಿವರ್ಷ ಸರಬರಾಜು ಮಾಡುತ್ತಿರುವ ಔಷಧಿಯ ಮೊತ್ತವೆಷ್ಟು;

ಆ) ಔಷಧಿಯನ್ನು ಸರಬರಾಜು ಮಾಡಲು ಅನುಸರಿಸುವ ಮಾನದಂಡಗಳೇನು;

ಇ) ಕೇಂದ್ರ ಮತ್ತು ಜಿಲ್ಲೆಯ ಬೇಡಿಕೆಗೆ ಅನುಗುಣವಾಗಿ ಔಷಧಿಯನ್ನು ಸರಬರಾಜು ಮಾಡಲಾಗುತ್ತಿದೆಯೇ; ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಈ ಸಂಸ್ಥೆಗಳಿಗೆ ವಾರ್ಷಿಕವಾಗಿ ಕೆಳಕಂಡಂತೆ ಔಷಧಿಗಳನ್ನು ಸರಬರಾಜು